**ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ: 3961/2025**

**ಚಾಸಾಃ  1  ಫ್ರಾಸಾಃ  1**

**ಸಾಕ್ಷಿಯನ್ನು ದಿಃ  02-05-2026  ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ನಾರಾಯಣಸ್ವಾಮಿ |
| ತಂದೆ ಹೆಸರುಃ | ಮುನಿವೆಂಕಟಪ್ಪ |
| ವಯಸ್ಸುಃ | 41 |
| ವೃತ್ತಿಃ | ಕೂಲಿ |
| ವಾಸ ಸ್ಥಳಃ | ಕಣಿಬೆಲೆ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿತರ ಪರಿಚಯ ನನಗೆ ಇರುವುದಿಲ್ಲ. ಮೃತ ಕೆ.ವಿ. ಮುನಿವೆಂಕಟಪ್ಪ ನನ್ನ ತಂದೆ. ಸದರಿಯವರು  ಅಪಘಾತದಲ್ಲಿ ತೀರಿಕೊಂಡಿರುತ್ತಾರೆ. ನನಗೆ ಅಪಘಾತದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.  ಅಪಘಾತವು ಯಾರ ತಪ್ಪಿನಿಂದ ಹಾಗೂ ಯಾವ ರೀತಿ ಆಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ.  ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಸದರಿ ದಾಖಲಾತಿಯು ದೂರು ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುವ ಕಾರಣದಿಂದಾಗಿ ಸದರಿ ದಾಖಲಾತಿಯನ್ನು ನಿ ಪಿ 1 ಎಂದು, ಸಾಕ್ಷಿಯ ಸಹಿ ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಸುಮಾರು 1 ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಮೃತ ಕೆ.ವಿ. ಮುನಿವೆಂಕಟಪ್ಪ ಲಿ ಹಾಕಿರುತ್ತೇನೆ. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಯಾವ ಕಾರಣಕ್ಕಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 07.05.2025 ರಂದು ರಾತ್ರಿ ಸುಮಾರು 08.00 ಗಂಟೆ ಸಮಯದಲ್ಲಿ ಆರೋಪಿಗೆ ಸೇರಿದ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನ ಸಂಖ್ಯೆ –ಕೆ.ಎ.08.ವಿ.5248 ವನ್ನು ಸೂಲಿಕುಂಟೆ–ಬಂಗಾರಪೇಟೆ ಮುಖ್ಯ ರಸ್ತೆಯಲ್ಲಿರುವ ಯಲುವಹಳ್ಳಿ ಗ್ರಮಕ್ಕೆ ಹೋಗುವ ಮಣ್ಣಿನ ರಸ್ತೆಯ ಸಮೀಪ ಸದರಿ ದ್ವಿಚಕ್ರ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗುತ್ತಿದ್ದರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಅದೇ ರಸ್ತೆಯಲ್ಲಿ ವಾಹನದ ಮುಂಭಾಗದ ರಸ್ತೆಯ ಎಡಬದಿಯಲ್ಲಿ ಕಣಿಬೆಲೆ ಕಡೆ ನಡೆದುಕೊಂಡು ಹೋಗುತ್ತಿದ್ದ ಮೃತ ಕೆ.ವಿ. ಮುನಿವೆಂಕಟಪ್ಪ ರವರಿಗೆ ಹಿಂಬದಿಯಿಂದ ಡಿಕ್ಕಿ ಪಡಿಸಿದ ಪರಿಣಾಮ, ಸದರಿ ಕೆ.ವಿ. ಮುನಿವೆಂಕಟಪ್ಪ ರವರು ಕೆಳಗಡೆ ಬಿದ್ದಿದ್ದರಿಂದ ಎಡಗಾಲು ಮುರಿದು ಹೋಗಿದ್ದು, ತಲೆಯ ಹಿಂಭಾಗ, ಕಿವಿಯ ಬಳಿ, ಬಲಗಾಲಿನ ಬಳಿ ರಕ್ತಗಾಯಗಳಾಗಿತ್ತು ಎಂದರೆ ಸರಿಯಲ್ಲ. ಸದರಿ ಗಾಯಾಳುದಾರರನ್ನು ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆಯನ್ನು ನೀಡಿ ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಕೋಲಾರದ ಆರ್.ಎಲ್.ಜಾಲಪ್ಪ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆಯನ್ನು ಕೊಡಿಸಿದ್ದು ಚಿಕಿತ್ಸೆಯು ಫಲಕಾರಿಯಾಗದೇ ಕೆ.ವಿ. ಮುನಿವೆಂಕಟಪ್ಪ ರವರು ದಿನಾಂಕ 12.05.2025 ರಂದು ಬೆಳಿಗ್ಗೆ ಸುಮಾರು 8.30 ಗಂಟೆ ಸಮಯದಲ್ಲಿ ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿಯು ಕೆ.ಎ.08.ವಿ.5248 ಎಂಬ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನದಿಂದ ಕೆ.ವಿ. ಮುನಿವೆಂಕಟಪ್ಪ ರವರಿಗೆ ಡಿಕ್ಕಿ ಪಡಿಸಿದ ನಂತರ ಸ್ಥಳದಿಂದ ವಾಹನದೊಂದಿಗೆ ಪರಾರಿಯಾಗಿರುತ್ತಾರೆ ಹಾಗೂ ಅಪಘಾತ ಪಡಿಸಿದ್ದ ಸಮಯದಲ್ಲಿ ಕೆ.ಎ.08.ವಿ.5248 ಎಂಬ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನಕ್ಕೆ ವಿಮೆ ಇರುವುದಿಲ್ಲ ಎಂದರೆ ಸರಿಯಲ್ಲ.

ಸದರಿ ಘಟನೆಗೆ ಸಂಬಂಧಿಸಿದಂತೆ ನಾನು ನಿಪಿ–1 ರಂತೆ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಘಟನೆಗೆ ಸಂಬಂಧಿಸಿದಂತೆ ಈಗ ಓದಿ ಹೇಳಿದಂತೆ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ. 2 ಎಂದು

ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಮತ್ತು ಅವರಿಗೆ ಪರಿಹಾರವನ್ನು ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆಃ** 3961/2025

**ಚಾಸಾಃ 3 ಪ್ರಾಸಾಃ 2**

**ಸಾಕ್ಷಿಯನ್ನು ದಿಃ 02.05.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಶ್ರೀನಿವಾಸ |
| ತಂದೆ ಹೆಸರುಃ | ನಾರಾಯಣಪ್ಪ |
| ವಯಸ್ಸುಃ | 65 |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ಕಣಿಬೆಲೆ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಆರೋಪಿತರ ಪರಿಚಯ ನನಗೆ ಇರುವುದಿಲ್ಲ. ಮೃತ ಕೆ.ವಿ. ಮುನಿವೆಂಕಟಪ್ಪ ನನ್ನ ಮಾವ . ಸದರಿಯವರು ಅಪಘಾತದಲ್ಲಿ ತೀರಿಕೊಂಡಿರುತ್ತಾರೆ.ನನಗೆ ಅಪಘಾತದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಅಪಘಾತವು ಯಾರ ತಪ್ಪಿನಿಂದ ಹಾಗೂ ಯಾವ ರೀತಿ ಆಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 07.05.2025 ರಂದು ರಾತ್ರಿ ಸುಮಾರು 08.00 ಗಂಟೆ ಸಮಯದಲ್ಲಿ ಆರೋಪಿಗೆ ಸೇರಿದ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನ ಸಂಖ್ಯೆ –ಕೆ.ಎ.08.ವಿ.5248 ವನ್ನು ಸೂಲಿಕುಂಟೆ–ಬಂಗಾರಪೇಟೆ ಮುಖ್ಯ ರಸ್ತೆಯಲ್ಲಿರುವ ಯಲುವಹಳ್ಳಿ ಗ್ರಮಕ್ಕೆ ಹೋಗುವ ಮಣ್ಣಿನ ರಸ್ತೆಯ ಸಮೀಪ ಸದರಿ ದ್ವಿಚಕ್ರ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗುತ್ತಿದ್ದರು ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಅದೇ ರಸ್ತೆಯಲ್ಲಿ ವಾಹನದ

ಮುಂಭಾಗದ ರಸ್ತೆಯ ಎಡಬದಿಯಲ್ಲಿ ಕಣಿಬೆಲೆ ಕಡೆ ನಡೆದುಕೊಂಡು ಹೋಗುತ್ತಿದ್ದ ಮೃತ ಕೆ.ವಿ. ಮುನಿವೆಂಕಟಪ್ಪ ರವರಿಗೆ ಹಿಂಬದಿಯಿಂದ ಡಿಕ್ಕಿ ಪಡಿಸಿದ ಪರಿಣಾಮ, ಸದರಿ ಕೆ.ವಿ. ಮುನಿವೆಂಕಟಪ್ಪ ರವರು ಕೆಳಗಡೆ ಬಿದ್ದಿದ್ದರಿಂದ ಎಡಗಾಲು ಮುರಿದು ಹೋಗಿದ್ದು, ತಲೆಯ ಹಿಂಭಾಗ, ಕಿವಿಯ ಬಳಿ, ಬಲಗಾಲಿನ ಬಳಿ ರಕ್ತಗಾಯಗಳಾಗಿತ್ತು ಎಂದರೆ ಸರಿಯಲ್ಲ. ಸದರಿ ಗಾಯಾಳುದಾರರನ್ನು ಬಂಗಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆಯನ್ನು ನೀಡಿ ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಕೋಲಾರದ ಆರ್.ಎಲ್.ಜಾಲಪ್ಪ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆಯನ್ನು ಕೊಡಿಸಿದ್ದು ಚಿಕಿತ್ಸೆಯು ಫಲಕಾರಿಯಾಗದೇ ಕೆ.ವಿ. ಮುನಿವೆಂಕಟಪ್ಪ ರವರು ದಿನಾಂಕ 12.05.2025 ರಂದು ಬೆಳಿಗ್ಗೆ ಸುಮಾರು 8.30 ಗಂಟೆ ಸಮಯದಲ್ಲಿ ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿಯು ಕೆ.ಎ.08.ವಿ.5248 ಎಂಬ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನದಿಂದ ಕೆ.ವಿ. ಮುನಿವೆಂಕಟಪ್ಪ ರವರಿಗೆ ಡಿಕ್ಕಿ ಪಡಿಸಿದ ನಂತರ ಸ್ಥಳದಿಂದ ವಾಹನದೊಂದಿಗೆ ಪರಾರಿಯಾಗಿರುತ್ತಾರೆ ಹಾಗೂ ಅಪಘಾತ ಪಡಿಸಿದ್ದ ಸಮಯದಲ್ಲಿ ಕೆ.ಎ.08.ವಿ.5248 ಎಂಬ ಟಿ.ವಿ.ಎಸ್. ವಿಕ್ಟರ್ ದ್ವಿಚಕ್ರ ವಾಹನಕ್ಕೆ ವಿಮೆ ಇರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಅಪಘಾತವು ನನ್ನ ಸಮಕ್ಷಮವೇ ಜರುಗಿರುತ್ತದೆ ಎಂದರೆ ಸರಿಯಲ್ಲ.

ಘಟನೆಗೆ ಸಂಬಂದಪಟ್ಟಂತೆ ದಿಃ 29-05-20259 ರಂದು ನಾನು ಪೊಲೀಸರಿಗೆ ಈಗ ಓದಿ ಹೇಳಿರುವಂತೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿತನೊಂದಿಗೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ